ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

8

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ     ದಿನಾಂಕ : DATE: 11/4/21

# ಉಪಚುನಾವಣೆ ಬಳಿಕ ಯತ್ನಾಳ ವಿರುದ್ಧ ಕ್ರಮ; ಅರುಣ್ ಸಿಂಗ್

ಪ್ರಜಾವಾಣಿ ವಾರ್ತೆ 11-4-21

ಸುರಪುರ (ಯಾದಗಿರಿ ಜಿಲ್ಲೆ): 'ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ವಿರುದ್ಧ ಆರೋಪ ಮಾಡುತ್ತಿರುವುದು, ಬಹಿರಂಗ ಹೇಳಿಕೆ ನೀಡುತ್ತಿರುವುದು ಪಕ್ಷ ವಿರೋಧಿ ಚಟುವಟಿಕೆಯಾಗಿದೆ. ಉಪಚುನಾವಣೆ ಮುಗಿದ ನಂತರ ಅವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲಾಗುವುದು' ಎಂದು ಬಿಜೆಪಿ ರಾಜ ಉಸ್ತುವಾರಿ ಅರುಣ್ ಸಿಂಗ್ ಹೇಳಿದರು.

ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬಸನಗೌಡ ಯತ್ನಾಳ ಅವರಿಗೆ ಈಗಾಗಲೇ ನೋಟಿಸ್ ನೀಡಲಾಗಿದೆ. ಆದರೂ ಅವರು ತಮ್ಮ ಚಾಳಿ ಬಿಡುತ್ತಿಲ್ಲ' ಎಂದರು.